## ಅಖಿಲ ಭಾರತ 84ನೇ ಕನ್ನಡ ಸಾಹಿತ್ಯ ಸಮ್ಮೇಳನ ಯಶಸ್ವಿಗೆ ಸಿದ್ಧತೆ ಮಾಡಿಕೊಳ್ಳಿ;

## ಕಸಾಪ ಹಾಗೂ ಜಿಲ್ಲಾಡಳಿತಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ವ್ಹಿ.ದೇಶಪಾಂಡೆ ಸೂಚನೆ

**ಧಾರವಾಡ (ಕರ್ನಾಟಕ ವಾರ್ತೆ) ಡಿ.02 :** ಬಹು ವರ್ಷಗಳ ನಂತರ ಸಾಹಿತ್ಯ, ಸಾಂಸ್ಕೃತಿಕ ರಾಜಧಾನಿ ಧಾರವಾಡದಲ್ಲಿ ಅಖಿಲ ಭಾರತ 84 ನೇಯ ಕನ್ನಡ ಸಾಹಿತ್ಯ ಸಮ್ಮೇಳನ ಜರುಗುತ್ತಿದ್ದು, ಜಿಲ್ಲಾ ಕಸಾಪ ಘಟಕ ಮತ್ತು ಜಿಲ್ಲಾಡಳಿತ ಯಾವುದೇ ಕೊರತೆ ಉಂಟಾಗದಂತೆ ಸಂಪೂರ್ಣ ಸಿದ್ಧತೆ ಮಾಡಿಕೊಳ್ಳಬೇಕೆಂದು ಕಂದಾಯ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆಗಳು ಮತ್ತು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಆರ್.ವ್ಹಿ.ದೇಶಪಾಂಡೆ ಹೇಳಿದರು.

ಅವರು ಇಂದು ಬೆಳಿಗ್ಗೆ ಇಲ್ಲಿನ ವಾರ್ತಾಭವನದಲ್ಲಿರುವ ಜಿಲ್ಲಾ ಉಸ್ತುವಾರಿ ಸಚಿವರ ಕಚೇರಿಯಲ್ಲಿ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಕಸಾಪ ಅಧ್ಯಕ್ಷರೊಂದಿಗೆ ಸಭೆ ನಡೆಸಿ, ಮಾತನಾಡಿದರು.

ಸಮ್ಮೇಳನಕ್ಕೆ ಅಗತ್ಯವಿರುವ ವಸತಿ, ಊಟದ ವ್ಯವಸ್ಥೆಯನ್ನು ಯಾವುದೇ ರೀತಿಯ ಕೊರತೆ ಆಗದಂತೆ ಮಾಡಿ. ಆದರೆ ಮುಂಚಿತವಾಗಿ ಅಗತ್ಯ ವಸತಿ ಹಾಗೂ ಊಟ, ಉಪಹಾರದ ಕುರಿತು ಕ್ರಿಯಾಯೋಜನೆ ಮಾಡಿಕೊಂಡು ಅನವಶ್ಯಕ ವೆಚ್ಚ ಆಗದಂತೆ ಎಚ್ಚರಿಕೆ ವಹಿಸಿ. ವೇದಿಕೆ, ಅಲಂಕಾರ, ಮೆರವಣಿಗೆ, ಪುಸ್ತಕ ಪ್ರದರ್ಶನ, ಪುಸ್ತಕ ಮಾರಾಟ ಮಳಿಗೆ ಮತ್ತು ಮಾಧ್ಯಮ ಪ್ರಚಾರ ಸೇರಿದಂತೆ ಉತ್ತಮ ರೀತಿಯಲ್ಲಿ ಸಿದ್ಧತೆ ಕಾರ್ಯ ಕೈಗೊಳ್ಳುವಂತೆ ಜಿಲ್ಲಾ ಉಸ್ತುವಾರಿ ಸಚಿವರು ತಿಳಿಸಿದರು.

ಸಮ್ಮೇಳನಕ್ಕೆ ಅಗತ್ಯವಿರುವ ಹಣಕಾಸು ನೆರವು ಕೇಳಿ ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಅದು ಆರ್ಥಿಕ ಇಲಾಖೆಗೆ ಹೋಗಿದೆ. ಸದ್ಯದಲ್ಲಿಯೇ ಅಂತಿಮವಾಗಿ ಹಣ ಬಿಡುಗಡೆಯಾಗಲಿದೆ. ಸಮ್ಮೇಳನದ ಉದ್ಘಾಟನೆಗೆ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರು ಹಾಗೂ ಸಮಾರೋಪ ಸಮಾರಂಭಕ್ಕೆ ಮಾಜಿ ಮುಖ್ಯಮಂತ್ರಿ ,ಶಾಸಕ ಸಿದ್ದರಾಮಯ್ಯ ಆಗಮಿಸಲಿದ್ದಾರೆ ಎಂದು ಸಚಿವರು ತಿಳಿಸಿದರು.

ಜಿಲ್ಲಾಧಿಕಾರಿ ದೀಪಾ ಚೋಳನ್ ಅವರು ಮಾತನಾಡಿ, ಸಮ್ಮೇಳನಕ್ಕೆ ಆಗಮಿಸುವ ಗಣ್ಯರಿಗೆ, ಅತಿಥಿಗಳಿಗೆ, ಆಹ್ವಾನಿತರಿಗೆ ಮತ್ತು ಪ್ರತಿನಿಧಿಗಳಿಗೆ ಅಗತ್ಯವಿರುವಷ್ಟು ವಸತಿ ವ್ಯವಸ್ಥೆಯನ್ನು ಅತಿಥಿಗೃಹ, ಹೊಟೇಲ್, ಹಾಸ್ಟೆಲ್, ಸಮುದಾಯ ಭವನ, ಖಾಸಗಿ ಪಿ.ಜಿ.ಗಳು ಸೇರಿದಂತೆ ವಿವಿಧೆಡೆ ಕಲ್ಪಿಸಲಾಗಿದೆ. ನಾಳೆ ಸಂಜೆಯೊಳಗೆ ಸಾಹಿತ್ಯ ಪರಿಷತ್ತು ಅಗತ್ಯ ವಸತಿಗಳ ಬೇಡಿಕೆ ಪಟ್ಟಿ ನೀಡಲಿದ್ದು ಅದರಂತೆ ಕ್ರಮಕೈಗೊಳ್ಳಲಾಗುವುದು. ಮತ್ತು ಸಾಹಿತ್ಯ ಸಮ್ಮೇಳನ ಸಿದ್ಧತೆಗಾಗಿ ರಚಿಸಿರುವ 16 ಸಮಿತಿಗಳು ಸಭೆ ಜರುಗಿಸಿ, ತಮಗೆ ನೀಡಿರುವ ಜವಾಬ್ದಾರಿಗಳನ್ನು ಅಚ್ಚುಕಟ್ಟಾಗಿ ನೆರವೇರಿಸುತ್ತಿದ್ದಾರೆ. ಸಮ್ಮೇಳನ ಯಶಸ್ವಿಗೆ ಎಲ್ಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಸಚಿವರಿಗೆ ವಿವರಿಸಿದರು. ಜಿಲ್ಲಾ ಕಸಾಪ ಅಧ್ಯಕ್ಷ ಡಾ.ಲಿಂಗರಾಜ ಅಂಗಡಿ ಮಾತನಾಡಿ, ಪುಸ್ತಕ ಮಳಿಗೆ, ವಾಣಿಜ್ಯ ಮಳಿಗೆ, ವೇದಿಕೆ ಸಿದ್ಧತೆ ಕಾರ್ಯ ನಡೆದಿದೆ ಎಂದು ಹೇಳಿದರು.

ಜಿಲ್ಲಾಪೊಲೀಸ್ ವರಿಷ್ಠಾಧಿಕಾರಿ ಸಂಗೀತಾ.ಜಿ., ಅಪರಜಿಲ್ಲಾಧಿಕಾರಿ ಇಬ್ರಾಹಿಂ ಮೈಗೂರ, ಉಪವಿಭಾಗಾಧಿಕಾರಿ ಮಹ್ಮದ್ ಜುಬೇರ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಎಸ್.ಜಿ.ಕೊರವರ, ರಂಗಾಯಣ ಆಡಳಿತಾಧಿಕಾರಿ ಕೆ.ಹೆಚ್.ಚನ್ನೂರ, ತಹಶೀಲ್ದಾರುಗಳಾದ ಶಶಿಧರ ಮಾಡ್ಯಾಳ, ಪ್ರಕಾಶ ಕುದರಿ ಸೇರಿದಂತೆ ವಿವಿಧ ಅಧಿಕಾರಿಗಳು, ಜನಪ್ರತಿನಿಧಿಗಳು ಮತ್ತು ಕಸಾಪ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಸಾರ್ವಜನಿಕರಿಂದ ಅಹವಾಲು ಸ್ವೀಕಾರ: ಜಿಲ್ಲಾ ಉಸ್ತುವಾರಿ ಸಚಿವ ಆರ್.ವ್ಹಿ.ದೇಶಪಾಂಡೆ ಅವರು ಇಂದು ಇಲ್ಲಿನ ತಮ್ಮ ಕಾರ್ಯಾಲಯದಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು. ನವಲಗುಂದ ಪಟ್ಟಣದ ಚರ್ಮಗಾರಿಕೆ ಕುಶಲಕರ್ಮಿ ಲಕ್ಷ್ಮೀ ಹೊನಕೇರಿ ಮತ್ತು ಮಂಜುಳಾ ಹಂಚಿಗಿ ಹಾಗೂ ಇತರರಿಂದ ಮನೆ ನಿರ್ಮಾಣ, ಉದ್ಯೋಗ ಅವಕಾಶ, ಆರ್ಥಿಕ ನೆರವು ಕೇಳಿ ಸಲ್ಲಿಸಿದ ಮನವಿಗಳನ್ನು ಸ್ವೀಕರಿಸಿ, ಸೂಕ್ತ ಕ್ರಮ ಜರುಗಿಸುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.